# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 614 |
| ಸದಸ್ಯರ ಹೆಸರು | : | ಶ್ರೀ. ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2024 ನೇ ಸಾಲಿನ ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಜನ ರೈತರು ಬೆಳೆ ವಿಮೆ ಸಲುವಾಗಿ ನೋಂದಣಿ ಮಾಡಿಕೊಂಡಿದ್ದಾರೆ; | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ 2024 ರ ಮುಂಗಾರು ಹಂಗಾಮಿನಲ್ಲಿ ಒಟ್ಟು 22.97 ಲಕ್ಷ ರೈತರು ಬೆಳೆ ವಿಮೆಗೆ ನೋಂದಣಿ ಮಾಡಿಕೊಂಡಿರುತ್ತಾರೆ.<br><br>2024-25 ರ ಹಿಂಗಾರು ಹಂಗಾಮಿನಲ್ಲಿ ಇಲ್ಲಿಯವರೆಗೆ (ದಿನಾಂಕ 03.12.2024) ಒಟ್ಟು 1.47 ಲಕ್ಷ ರೈತರು ಬೆಳೆ ವಿಮೆಗೆ ನೋಂದಣಿಯಾಗಿರುತ್ತಾರೆ ಹಾಗೂ ನೋಂದಣಿ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಆ) | ಕಳೆದ ಎರಡು ವರ್ಷಗಳಲ್ಲಿ ರೈತರಿಗೆ ಎಷ್ಟು ಬೆಳೆ ವಿಮೆ ಪರಿಹಾರ ನೀಡಲಾಗಿದೆ; | ಕಳೆದ ಎರಡು ವರ್ಷಗಳಲ್ಲಿ ಒಟ್ಟು 30.17 ಲಕ್ಷ ಅರ್ಹ ರೈತ ಫಲಾನುಭವಿಗಳ ಅರ್ಜಿಗಳಿಗೆ ರೂ.3398.58 ಕೋಟಿಗಳ ಬೆಳೆ ವಿಮೆ ಪರಿಹಾರ ಮೊತ್ತವನ್ನು ರೈತರಿಗೆ ನೀಡಲಾಗಿದೆ. |
| ಇ) | ಈ ಪೈಕಿ ಕೇಂದ್ರ ಪುರಸ್ಕೃತ ಯೋಜನೆಗಳ ಮೂಲಕ ರಾಜ್ಯಕ್ಕೆ ಸಂದಾಯವಾದ ಮೊತ್ತವೆಷ್ಟು; | ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕೇಂದ್ರ ವಲಯ ಯೋಜನೆಯಾಗಿರುತ್ತದೆ. ರೈತರ ಪರವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರೀಮಿಯಂ ಸಬ್ಸಿಡಿಯನ್ನು ವಿಮಾ ಸಂಸ್ಥೆಯವರಿಗೆ ನೀಡಲಾಗುತ್ತದೆ.<br><br>ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಒಟ್ಟು ರೂ.1675.15 ಕೋಟಿಗಳ ಮತ್ತು ರಾಜ್ಯ ಸರ್ಕಾರದಿಂದ ಒಟ್ಟು ರೂ.1767.33 ಕೋಟಿಗಳ ಪ್ರೀಮಿಯಂ ಸಬ್ಸಿಡಿಯು ವಿಮಾ ಸಂಸ್ಥೆಯವರಿಗೆ ಸಂದಾಯವಾಗಿರುತ್ತದೆ. |
| ಈ) | ಬೆಳೆ ವಿಮೆ ಪರಿಹಾರಕ್ಕೆ ರೈತರಿಗೆ ಆಗಿಂದಾಗ್ಗೆ ಅಗತ್ಯ ಮಾಹಿತಿ ನೀಡಲಾಗುತ್ತಿದೆಯೇ? | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಪರಿಹಾರಕ್ಕೆ ರೈತರಿಗೆ ಆಗಿಂದಾಗ್ಗೆ ಅಗತ್ಯ ಮಾಹಿತಿ ನೀಡಲಾಗುತ್ತಿದೆ.<br><br>ಸದರಿ ಯೋಜನೆಯ ಸೌಲಭ್ಯಗಳ ಕುರಿತು ಸರ್ಕಾರವು ಸ್ಥಳೀಯ ಮತ್ತು ರಾಜ್ಯ ಪ್ರಮುಖ ದಿನಪತ್ರಿಕೆಗಳಲ್ಲಿ ಜಾಹಿರಾತು, ಭಿತ್ತಿಪತ್ರಗಳು, ಕರಪತ್ರಗಳ ಮತ್ತು ತರಬೇತಿಗಳನ್ನು ನೀಡುವ ಮುಖೇನ, ಸಮೂಹ |

| | | |
|---|---|---|
| | | ಮಾಧ್ಯಮಗಳ ಮೂಲಕ, ಜನಸ್ಪಂದನ ಮತ್ತು ಗ್ರಾಮ ಸಭೆಗಳಲ್ಲಿ ಜಾಗೃತಿ ಮೂಡಿಸಲಾಗತ್ತಿದೆ. ಅಲ್ಲದೇ, ಪ್ರತಿ ವರ್ಷ ಹಂಗಾಮು ಪೂರ್ವದಲ್ಲಿ ವಿಮಾ ಸಂಸ್ಥೆಯವರು ಜಿಲ್ಲೆಗಳಲ್ಲಿ ಯೋಜನೆಯ ಕುರಿತು ಮಾಹಿತಿ, ಶಿಕ್ಷಣ ಹಾಗೂ ಸಂವಹನ ಚಟುವಟಿಕೆಗಳ ಮೂಲಕ ಯೋಜನೆಯ ಕುರಿತು ಅರಿವು ಮೂಡಿಸಲು ಪ್ರಚಾರವನ್ನು ಕೈಗೊಳ್ಳುತ್ತಾರೆ.<br><br>ಬೆಳೆ ವಿಮೆ ಪರಿಹಾರ ಮೊತ್ತ ಅರ್ಹ ರೈತರ ಬ್ಯಾಂಕ್ ಖಾತೆಗೆ ಜಮೆ ಆಗಿರುವ ಸಂಪೂರ್ಣ ವಿವರವನ್ನು ಸಂರಕ್ಷಣೆ ತಂತ್ರಾಂಶದಿಂದ ಪಡೆಯಬಹುದು. |

***ಸಂಖ್ಯೆ: ಕೃಇ/138/ಎಎಂಎಸ್/2024***

**(ಎನ್.ಚಲುವರಾಯಸ್ವಾಮಿ)**
ಕೃಷಿ ಸಚಿವರು